All India Radio: Bangalore
Regional Bulletin In Kannada
11.05.2026 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಸಕಲ ಸರ್ಕಾರಿ ಗೌರವದೊಂದಿಗೆ ಸಚಿವ ಡಿ.ಸುಧಾಕರ್ ಅಂತ್ಯಕ್ರಿಯೆ; ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸೇರಿ ಗಣ್ಯರು ಭಾಗಿ
- ಮಲೆಮಹದೇಶ್ವರ ಭಕ್ತರ ಸುರಕ್ಷತೆಗೆ ಶಾಶ್ವತ ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರಕ್ಕೆ ವಿಪಕ್ಷ ನಾಯಕ ಆರ್.ಅಶೋಕ ಆಗ್ರಹ
- ಚಾಮರಾಜನಗರ ಜಿಲ್ಲೆಯ ಹನೂರಿನಲ್ಲಿ ಚಿರತೆ ಸೆರೆಗೆ ಅರಣ್ಯ ಇಲಾಖೆ ನಿರಂತರ ಕಾರ್ಯಾಚರಣೆ
- ಬೆಂಗಳೂರಿನಲ್ಲಿ ಅಟಲ್ ಬಿಹಾರಿ ವಾಜಪೇಯಿ ಯೋಗ ಕೇಂದ್ರ ಉದ್ಘಾಟಿಸಿದ ಸಚಿವೆ ಶೋಭಾ ಕರಂದ್ಲಾಜೆ

---

ಸಕಲ ಸರ್ಕಾರಿ ಗೌರವದೊಂದಿಗೆ ಚಳ್ಳಕೆರೆಯ ಚಿತಾಗಾರದಲ್ಲಿ ಹಿರಿಯೂರು ಶಾಸಕ, ಸಚಿವ ಡಿ.ಸುಧಾಕರ್ ಅವರ ಅಂತ್ಯಕ್ರಿಯೆ ನೆರವೇರಿದೆ.

ಅಂತ್ಯಕ್ರಿಯೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಸ್ತುವಾರಿ ಸಚಿವ ಸುರ್ಜೇವಾಲಾ, ಸಚಿವರು, ಶಾಸಕರು, ಸೇರಿದಂತೆ ಹಲವು ಗಣ್ಯರು ಭಾಗಿಯಾಗಿದ್ದರು.

ಇದಕ್ಕೂ ಮುನ್ನ ಕ್ರೀಡಾಂಗಣದಲ್ಲಿ ಸಾವಿರಾರು ಜನರು ಪಾರ್ಥಿವ ಶರೀರದ ಅಂತಿಮ ನಮನ ಸಲ್ಲಿಸಿದರು. ಬಳಿಕ ಕ್ರೀಡಾಂಗಣದಿಂದ ಜೈನ ಮುಕ್ತಿಧಾಮದವರೆಗೆ ತೆರೆದ ವಾಹನದಲ್ಲಿ ಪಾರ್ಥಿವ ಶರೀರದ ಮೆರವಣಿಗೆ ನಡೆಸಲಾಯಿತು.

---

ರಾಜ್ಯ ಸರ್ಕಾರಿ ನೌಕರರಿಗೆ ೨೦೨೮ರ ಜನವರಿ ೧ ರಿಂದ ಪೂರ್ವಾನ್ವಯವಾಗುವಂತೆ ರಾಜ್ಯ ಸರ್ಕಾರ ತುಟ್ಟಿಭತ್ಯೆಯನ್ನು ಶೇಕಡ ೧.೫ ರಷ್ಟು ಹೆಚ್ಚಿಸಿದೆ.

ತುಟ್ಟಿಭತ್ಯೆ ದರಗಳು ಪ್ರಸ್ತುತ ಮೂಲವೇತನದ ಶೇಕಡಾ ೧೪.೨೫ ರಿಂದ ಶೇಕಡ ೧೫.೭೫ ಕ್ಕೆ ಪರಿಷ್ಕರಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಇದು ರಾಜ್ಯ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರಿಗೆ ಅನುಕೂಲವಾಗಲಿದೆ.

---

ಮಲೆ ಮಹದೇಶ್ವರ ಬೆಟ್ಟದಲ್ಲಿ ಭಕ್ತರ ಮೇಲೆ ಚಿರತೆ ದಾಳಿ ನಡೆದಿರುವ ಹಿನ್ನೆಲೆಯಲ್ಲಿ, ಮಲೆ ಮಹದೇಶ್ವರ ಬೆಟ್ಟಕ್ಕೆ ಭೇಟಿ ನೀಡುವ ಭಕ್ತರ ಸುರಕ್ಷತೆ ಖಚಿತಪಡಿಸಿಕೊಳ್ಳಲು ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವೇ ದಿನಗಳಲ್ಲಿ ಮೂರು ಚಿರತೆ ದಾಳಿಗಳು ನಡೆದಿದ್ದು, ಇಬ್ಬರು ಅಮಾಯಕ ಭಕ್ತರು ಸಾವನ್ನಪ್ಪಿದ್ದಾರೆ. ಇದು ಆಡಳಿತಾತ್ಮಕ ವೈಫಲ್ಯವಲ್ಲವೇ? ಇದು ಸರ್ಕಾರದ ನಿರ್ಲಕ್ಷ್ಯವಲ್ಲವೇ? ಎಂದು ಅವರು ಪ್ರಶ್ನಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರು ಪರಿಸ್ಥಿತಿಯನ್ನು ಅರಿತುಕೊಂಡು, ದೇವಾಲಯಕ್ಕೆ ಭೇಟಿ ನೀಡುವ ಭಕ್ತರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ತಕ್ಷಣ ಶಾಶ್ವತ ಮತ್ತು ಕಠಿಣ ಕ್ರಮಗಳನ್ನು ಜಾರಿಗೆ ತರಬೇಕು ಎಂದು ಆರ್.ಅಶೋಕ ಒತ್ತಾಯಿಸಿದ್ದಾರೆ.

---

ಮಲೆ ಮಹದೇಶ್ವರ ವನ್ಯಜೀವಿಧಾಮ ವ್ಯಾಪ್ತಿಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಿಂದ ನಾಗಮಲೆಗೆ ತೆರಳುವಾಗ ಚಿರತೆ ದಾಳಿ ನಡೆಸಿ, ಬಾಲಕ ಮೃತಪಟ್ಟ ಪ್ರಕರಣ ಸಂಬಂಧ ಅರಣ್ಯ ಇಲಾಖೆಯು, ಚಿರತೆ ಸೆರೆಗೆ ನಿರಂತರ ಕಾರ್ಯಾಚರಣೆ ನಡೆಸುತ್ತಿದೆ.

ಮಲೆ ಮಹದೇಶ್ವರ ಬೆಟ್ಟ ಎಸಿಎಫ್ ನೇತೃತ್ವದ ತಂಡದಿಂದ ಕಾರ್ಯಚರಣೆ ನಡೆಸಲಾಗುತ್ತಿದ್ದು, ಮೈಸೂರಿನಿಂದ ಚಿರತೆ ಸೆರೆ ಕಾರ್ಯಪಡೆ, ಡ್ರೋಣ್ ಕಾರ್ಯಾಚರಣೆ ಹಾಗೂ ಪಶು ವೈದ್ಯರು ಪಾಲ್ಗೊಂಡಿದ್ದಾರೆ ಎಂದು ಮಲೆ ಮಹದೇಶ್ವರ ವನ್ಯಜೀವಿಧಾಮದ ಡಿಸಿಎಫ್ ಭಾಸ್ಕರ್ ಮಾಹಿತಿ ನೀಡಿದ್ದಾರೆ.

ಡ್ರೋಣ್ ನಲ್ಲಿ ಒಂದು ಬಾರಿ ಚಿರತೆ ದೃಶ್ಯ ಸೆರೆ ಸಿಕ್ಕಿದ್ದು, ತೀವ್ರ ಕಾರ್ಯಾಚರಣೆ ನಡೆಸಲಾಗುತ್ತಿದೆ. ಚಿರತೆ ಸೆರೆಯಾಗುವ ತನಕ ನಾಗಮಲೆಗೆ ಚಾರಣ ನಡೆಸಲು ತಾತ್ಕಲಿಕ ನಿರ್ಬಂಧ ಹೇರಲಾಗಿದೆ ಎಂದು ಅವರು ತಿಳಿಸಿದ್ದಾರೆ.

---

ಕೇಂದ್ರ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರು, ಬೆಂಗಳೂರಿನಲ್ಲಿ ಇಂದು ಅಟಲ್ ಬಿಹಾರಿ ವಾಜಪೇಯಿ ಯೋಗ ಕೇಂದ್ರವನ್ನು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಯೋಗ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ಧಿ ಪಡೆದಿದೆ. ಇಂದಿನ ಒತ್ತಡದ ಬದುಕಿನಲ್ಲಿ, ವಿಶೇಷವಾಗಿ ಮಹಿಳೆಯರು ಮತ್ತು ಯುವಜನರಲ್ಲಿ ಆರೋಗ್ಯದ ಸಮಸ್ಯೆಗಳು ಹೆಚ್ಚಾಗುತ್ತಿವೆ. ಈ ಸಮಸ್ಯೆಗಳಿಗೆ ಯೋಗ ಅತ್ಯುತ್ತಮ ಔಷಧವಾಗಿದೆ. ಯೋಗಾಸನಗಳು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತವೆ. ಪ್ರತಿಯೊಬ್ಬ ನಾಗರಿಕನು

ಆರೋಗ್ಯವಂತನಾಗಿದ್ದರೆ ಮಾತ್ರ ನಾವು 'ವಿಕಸಿತ ಭಾರತ'ವನ್ನು ನಿರ್ಮಿಸಲು ಸಾಧ್ಯ ಎಂದು ಹೇಳಿದರು.

---

ಪೊಲೀಸ್ ಇಲಾಖೆಯು, ರಾಜ್ಯಾದ್ಯಂತ ಹಿರಿಯ ನಾಗರಿಕರ ಮತ್ತು ಒಂಟಿ ಮಹಿಳೆಯರ ಸುರಕ್ಷತೆಗಾಗಿ 'ಆಸರೆ' ಕಾರ್ಯಕ್ರಮವನ್ನು ಜಾರಿಗೊಳಿಸಿದೆ. ವಿಜಯಪುರ ಜಿಲ್ಲೆಯ ೨೮ ಪೊಲೀಸ್ ಠಾಣೆಗಳ ವ್ಯಾಪ್ತಿಯ ೩೨೯ ಬೀಟ್‌ಗಳಲ್ಲಿ ಈ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆ ಎಂದು ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು, 'ಆಸರೆ' ಕಾರ್ಯಕ್ರಮವು ಏಕಾಂಗಿಯಾಗಿ ವಾಸಿಸುವ ಹಿರಿಯ ನಾಗರಿಕರಿಗೆ ಹಾಗೂ ಒಂಟಿ ಮಹಿಳೆಯರಿಗೆ ಸುರಕ್ಷತೆ ಮತ್ತು ಅವರಲ್ಲಿ ಒಂಟಿ ಭಾವನೆಯನ್ನು ಹೋಗಲಾಡಿಸಿ, ವಿಶ್ವಾಸ ಮೂಡಿಸುವ ಗುರಿ ಹೊಂದಿದೆ ಎಂದರು.

ವಿಜಯಪುರ ಜಿಲ್ಲೆಯಲ್ಲಿ ಈಗಾಗಲೇ ಮನೆ-ಮನೆಗೆ ಪೊಲೀಸ್ ಕಾರ್ಯಕ್ರಮವು ಜಾರಿಯಲ್ಲಿದ್ದು, ಏಕಾಂಗಿಯಾಗಿ ವಾಸಿಸುವ ಹಿರಿಯ ನಾಗರಿಕರ, ಒಂಟಿ ಮಹಿಳೆಯರನ್ನು ಗುರುತಿಸಿ, ಖುದ್ದಾಗಿ ಭೇಟಿಯಾಗಿ, ಅವರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಆಲಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

---

ಮಂಡ್ಯ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಆದ್ಯತೆ ಮೇರೆಗೆ ಪರಿಹರಿಸಲು ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಸೂಚನೆ ನೀಡಿದ್ದಾರೆ.

ಮಂಡ್ಯ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಜಿಲ್ಲಾ ವಿಪತ್ತು ನಿರ್ಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೀರಿನ ಸಮಸ್ಯೆ ಇರುವ ೧೫ ಗ್ರಾಮಗಳಲ್ಲಿ ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಒದಗಿಸಲಾಗುತ್ತಿದೆ. ೨ ಗ್ರಾಮಗಳಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಹೆಚ್ಚು ಸಮಸ್ಯೆ ಇರುವ ಗ್ರಾಮಗಳಿಗೆ ಕಡ್ಡಾಯವಾಗಿ ಸ್ಥಳಕ್ಕೆ ಭೇಟಿ ನೀಡಿ, ವಾಸ್ತವ ವಿಷಯ ತಿಳಿದು, ಅಲ್ಲಿನ ಸಮಸ್ಯೆಗಳನ್ನು ಬಗೆಹರಿಸಬೇಕು. ಕುಡಿಯುವ ನೀರಿನ ಬಿಕ್ಕಟ್ಟನ್ನು ಪರಿಹರಿಸಲು ಆದ್ಯತೆಯ ಮೇರೆಗೆ ತಹಸೀಲ್ದಾರ್‌ಗಳು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಣಾ ಅಧಿಕಾರಿಗಳು ಮತ್ತು ಗ್ರಾಮೀಣ ನೀರು ಸರಬರಾಜು ಇಲಾಖೆ ಅಧಿಕಾರಿಗಳು ಕ್ರಮ ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ನಿರ್ದೇಶನ ನೀಡಿದರು.

---

ಯಾದಗಿರಿ ಜಿಲ್ಲೆಯಲ್ಲಿ ಉಷ್ಣಾಂಶ ಹೆಚ್ಚುತ್ತಿರುವ ಹಿನ್ನೆಲೆ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಯಾದಗಿರಿ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ, ಕೊಳವೆಬಾವಿ ಮತ್ತು ಆರ್‌ಒ ಘಟಕಗಳ ಕಾರ್ಯನಿರ್ವಹಣೆಯ ಮೇಲೆ ಅಧಿಕಾರಿಗಳು ನಿರಂತರ ನಿಗಾ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಜನರಲ್ಲಿ ಸುರಕ್ಷಿತ ಕುಡಿಯುವ ನೀರಿನ ಬಳಕೆಯ ಕುರಿತು ಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ನಾರಾಯಣಪುರ ಜಲಾಶಯ, ಗೂಗಲ್ ಬ್ಯಾರೇಜ್ ಸೇರಿದಂತೆ ಜಿಲ್ಲೆಯ ಪ್ರಮುಖ ಜಲಮೂಲಗಳಲ್ಲಿನ ನೀರಿನ ಸಂಗ್ರಹ ಮತ್ತು ಲಭ್ಯತೆಯ ಬಗ್ಗೆ ಸಮಗ್ರ ಮಾಹಿತಿಯನ್ನು ನಿರಂತರವಾಗಿ ಸಂಗ್ರಹಿಸಬೇಕು ಎಂದು ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಅಧಿಕಾರಿಗಳಿಗೆ ಸೂಚನೆ ನಿಡಿದ್ದಾರೆ.

---

ಹೆಣ್ಣು ಮಕ್ಕಳ ಆರೋಗ್ಯದ ದೃಷ್ಟಿಯಿಂದ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಬಳ್ಳಾರಿ ಜಿಲ್ಲೆಯಾದ್ಯಂತ ೧೪ ವರ್ಷದ ಹೆಣ್ಣು ಮಕ್ಕಳಿಗೆ ಉಚಿತವಾಗಿ ಹ್ಯೂಮನ್ ಪ್ಯಾಪಿಲೋಮ ವೈರಸ್-

ಹೆಚ್.ಪಿ.ವಿ ಲಸಿಕೆಯನ್ನು ನೀಡಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ತಿಳಿಸಿದ್ದಾರೆ.

ವೈಯಕ್ತಿಕ ಶುಚಿತ್ವದ ಕೊರತೆ ಹಾಗೂ ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಹೆಚ್.ಪಿ.ವಿ ಸೋಂಕು ಕಾಲಕ್ರಮೇಣ ಕ್ಯಾನ್ಸರ್ ಆಗಿ ಮಾರ್ಪಡುತ್ತದೆ. ಇದನ್ನು ತಡೆಯಲು ಹೆಚ್.ಪಿ.ವಿ ಲಸಿಕೆ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ.

ಈ ಲಸಿಕೆ ಪಡೆಯುವುದರಿಂದ ಗರ್ಭಕಂಠದ ಕ್ಯಾನ್ಸರ್ ಶೇಕಡಾ ೯೯ ರಷ್ಟು ತಡೆಯಬಹುದಾಗಿದೆ. ಬಳ್ಳಾರಿ ಜಿಲ್ಲೆಯಲ್ಲಿ ಕಳೆದ ಮಾರ್ಚ್ ೧೧ ರಿಂದ ಹೆಚ್.ಪಿ.ವಿ ಲಸಿಕಾ ಅಭಿಯಾನ ಆರಂಭವಾಗಿದೆ. ಜಿಲ್ಲೆಯಲ್ಲಿ ೧೬ ಸಾವಿರದ ೪೯೫ ಹೆಣ್ಣು ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದ್ದು, ಈವರೆಗೆ ೫ ಸಾವಿರದ ೬೫೮ ಮಕ್ಕಳಿಗೆ ಲಸಿಕೆ ನೀಡಲಾಗಿದೆ ಎಂದು ಡಾ.ಯಲ್ಲಾ ರಮೇಶ್ ಬಾಬು ಮಾಹಿತಿ ನೀಡಿದ್ದಾರೆ.

---

ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ಆಗಸ್ಟ್ ೨೧, ೨೨ ಮತ್ತು ೨೩, ರಂದು 'ಸಮಾಧಾನ ಸಮಾರೋಹ' ಎಂಬ ವಿಶೇಷ ಲೋಕ್ ಅದಾಲತ್ ನಡೆಯಲಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ್ ಎಂ.ಎಸ್. ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ, ಶಿವಮೊಗ್ಗ ಜಿಲ್ಲೆಯಲ್ಲಿ ಮುಂಬರುವ ತಿಂಗಳಲ್ಲಿ ಸರಣಿ ಲೋಕ್ ಅದಾಲತ್ ಹಾಗೂ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಜಿಲ್ಲೆಯಿಂದ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿ, ಬಹುಕಾಲದಿಂದ ಬಾಕಿ ಇರುವ ೪೭ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲು ಗುರುತಿಸಲಾಗಿದೆ. ಹೀಗೆ

ಸುಪ್ರೀಂ ಕೋರ್ಟ್‌ನಲ್ಲಿ ಬಹುಕಾಲದಿಂದ ಬಾಕಿ ಇದ್ದು, ರಾಜೀ ಸಂಧಾನಕ್ಕೆ ಸಿದ್ಧವಿರುವವರು, ಈಗಲೂ ಸಹ ಕಾನೂನು ಸೇವಾ ಪ್ರಾಧಿಕಾರವನ್ನು ಸಂಪರ್ಕಿಸಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು ಎಂದು ಅವರು ಮಾಹಿತಿ ನೀಡಿದರು.

___________________

ಸರ್ಕಾರಿ ಇಲಾಖೆಗಳು, ಸರ್ಕಾರದ ಸ್ವಾಮ್ಯದ ಪ್ರಾಧಿಕಾರಗಳು ಹಾಗೂ ಇತರೆಡೆ ಕನ್ನಡ ಭಾಷೆಯನ್ನು ಆಡಳಿತದಲ್ಲಿ ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ಸೂಚಿಸಿದ್ದಾರೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ವ್ಯಾಪಾರ ಮಳಿಗೆಗಳು, ಕೈಗಾರಿಕೆಗಳು, ಕಚೇರಿಗಳಲ್ಲಿ ನಾಮಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡ ಭಾಷೆಯಲ್ಲೇ ಇರುವಂತೆ ಸಂಬಂಧಪಟ್ಟ ಇಲಾಖೆಗಳು ಕ್ರಮ ವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

_________ಮುಕ್ತಾಯ__________